# ಕರ್ನಾಟಕ ವಿಧಾನ ಪರಿಷತ್ತು

**158ನೇ ಅಧಿವೇಶನ**
**ಮುಂದುವರೆದ ಉಪವೇಶನಗಳು**

## ಸಂತಾಪ ಸೂಚನೆ

**ಮಾನ್ಯ ಸಭಾಪತಿಯವರು:-**

ವಿಧಾನ ಪರಿಷತ್ತಿನ ಮಾಜಿ ಶಾಸಕರಾಗಿದ್ದ ಕರಿಯಣ್ಣ ಹೆಚ್. ಸಂಗಟಿ ಅವರು ಇಂದು ನಿಧನರಾಗಿರುವುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.

## ಕರಿಯಣ್ಣ ಹೆಚ್. ಸಂಗಟಿ

ವಿಧಾನ ಪರಿಷತ್ತಿನ ಮಾಜಿ ಶಾಸಕರಾಗಿದ್ದ ಕರಿಯಣ್ಣ ಹೆಚ್. ಸಂಗಟಿ ಅವರು ದಿನಾಂಕ:23.03.2026 ರಂದು ನಿಧನ ಹೊಂದಿರುತ್ತಾರೆ.

1965ರ ಜೂನ್ 01 ರಂದು ರಾಯಚೂರು ಜಿಲ್ಲೆಯ ಎಲ್ಮಗೆರೆ ಗ್ರಾಮದಲ್ಲಿ ಜನಿಸಿದ್ದ ಶ್ರೀಯುತರು ವೃತ್ತಿಯಲ್ಲಿ ಕೃಷಿಕರು ಹಾಗೂ ಸಮಾಜ ಸೇವಕರಾಗಿದ್ದರು.

ಶ್ರೀಯುತರು 2000 ರಿಂದ 2006ರ ಅವಧಿಗೆ ವಿಧಾನ ಸಭೆಯಿಂದ ಚುನಾಯಿತರಾಗಿ ವಿಧಾನ ಪರಿಷತ್ತಿನ ಮಾನ್ಯ ಶಾಸಕರಾಗಿ ಸೇವೆಯನ್ನು ಸಲ್ಲಿಸಿದ್ದರು.

ರಾಯಚೂರು ಜಿಲ್ಲೆಯ ಸೇವಾದಳದಲ್ಲಿ ಸಂಘಟಕರಾಗಿ, ಕೊಪ್ಪಳ ತಾಲ್ಲೂಕು ಯುವ ಕಾಂಗ್ರೆಸ್ ಸಮಿತಿಯ ಸದಸ್ಯರಾಗಿ, ರಾಯಚೂರು ಜಿಲ್ಲೆಯ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿಯಾಗಿ, ಕೊಪ್ಪಳ ತಾಲ್ಲೂಕು ಲ್ಯಾಂಡ್ ಡೆವಲಪ್ಮೆಂಟ್ ಬ್ಯಾಂಕ್‌ನ ಸದಸ್ಯರಾಗಿ, ರಾಯಚೂರು

ಜಿಲ್ಲಾ ಪಂಚಾಯತ್ ಸದಸ್ಯರಾಗಿ, ಕೊಪ್ಪಳ ಜಿಲ್ಲೆಯ ಪಂಚಾಯತ್ ಅಧ್ಯಕ್ಷರಾಗಿ, ಕೊಪ್ಪಳ ಜಿಲ್ಲೆಯ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ, ಕೊಪ್ಪಳ ಜಿಲ್ಲೆಯ ರಾಜೀವ್ ಗಾಂಧಿ ಯುವಕ ಮಂಡಲದ ಅಧ್ಯಕ್ಷರಾಗಿ ಹಾಗೂ ಕಾಳಿದಾಸ ಪ್ರೌಢಶಾಲೆಯ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದರು.

ಶ್ರೀಯುತರು ವನಮಹೋತ್ಸವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಲ್ಲಿ, ಬಡವರಿಗಾಗಿ ಆರೋಗ್ಯ ಮತ್ತು ನೇತ್ರ ಶಿಬಿರಗಳನ್ನು ಏರ್ಪಡಿಸಿ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರು.

**ಶ್ರೀಯುತರ ನಿಧನದಿಂದಾಗಿ ರಾಜ್ಯವು ಸರಳ ಸಜ್ಜನ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಂತಾಗಿದೆ**.

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ**:-

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.